372 (824) ಶ್ರೀ ಜೀವಿಜಯ ಬಿ ಎ (ಸೋಮವಾರಪೇಟೆ) ಮಾನ್ಯ ಮಾನ್ಯ ಮುಖ್ಯಮಂತ್ರಿಯವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆ ಸೋಮವಾರಪೇಟೆ ಪಟ್ಟಣಕ್ಕೆ ಹಾರಂಗಿಯಿಂದ ನೀರು ಸರಬರಾಜು ಮಾಡುವ ಯೋಜನೆಗೆ ಕೇಂದ್ರ ಸರ್ಕಾರದ ಅನುಮತಿ ದೊರೆತಿರುವುದು ನಿಜವಲ್ಲವೇ,

ಆ) ಹಾಗಿದ್ದಲ್ಲಿ, ಟೆಂಡರ್ ಆಗಿ ಕಾಮಗಾರಿ ಪ್ರಾರಂಭಿಸಿದ್ದರೂ ಸಹ ರಾಜ್ಯ ಸರ್ಕಾರ ತನ್ನ ಪಾಲಿನ ಹಣವನ್ನು ಬಿಡುಗಡೆ ಮಾಡದಿರಲು ಕಾರಣವೇನು ,

ಇ) ಈ ಯೋಜನೆಯನ್ನು ಕಾರ್ಯಗತಗೊಳಿಸಲು ಯಾವಾಗ ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಯವರು).

ಅ) ಹೌದು

ಆ) ರಾಜ್ಯ ಸರ್ಕಾರವು ಈ ಯೋಜನೆಗೆ 406,08 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿದ್ದು, ಇದರಲ್ಲಿ ರೂ 45 96 ಲಕ್ಷ ರೂ ಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿರುತ್ತದೆ ಈ ಯೋಜನೆಗೆ ಈಗಾಗಲೇ ಬಿಡುಗಡೆಯಾಗಿರುವ ಮೊತ್ತದ ವಿವರಗಳು ಈ ಕೆಳಕಂಡಂತಿರುತ್ತದೆ

ರಾಜ್ಯ ಸರ್ಕಾರದ ಅನುದಾನ – ರೂ 45 96
ಕೇಂದ್ರ ಸರ್ಕಾರದ ಅನುದಾನ– ರೂ 45 96
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್
ರಾಜ್ ಇಲಾಖೆಯ ಅನುದಾನ ರೂ 112 00
ಒಟ್ಟು ರೂ 203 92
ಲಕ್ಷಗಳು

ಇ) ಈ ಯೋಜನೆಯನ್ನು ಕಾರ್ಯಗತಗೊಳಿಸಲು ಮೇಲೆ ನಮೂದಿಸಿದಂತೆ ರೂ 203 92 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಬಾಕಿ ಮೊತ್ತವನ್ನು ಅವಶ್ಯಕತೆಯ ಆಧಾರದ ಮೇಲೆ ಬಿಡುಗಡೆ ಮಾಡಲಾಗುವುದು

373 (825) ಶ್ರೀ ಜೀವಿಜಯ ಬಿ ಎ (ಸೋಮವಾರಪೇಟೆ) . ಮಾನ್ಯ ಮಾನ್ಯ ಮುಖ್ಯಮಂತ್ರಿಯವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?